All India Radio: Bangalore
National Bulletin In Kannada
06.01.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ಪೌಷ್ಠಿಕಾಂಶ ಭದ್ರತೆ ಕುರಿತ ಸಾಮಾಜಿಕ ಸಾಂಸ್ಥಿಕ ಜವಾಬ್ದಾರಿ ಸಮಾವೇಶವನ್ನು ದೆಹಲಿಯಲ್ಲಿಂದು ಉದ್ಘಾಟಿಸಲಿರುವ ಕೇಂದ್ರ ಸಚಿವ ಅಮಿತ್ ಶಾ
2. ವಿಕಸಿತ ಭಾರತದ ಜೊತೆಗೆ ವಿಕಸಿತ ಗ್ರಾಮಗಳ ನಿರ್ಮಾಣ ಅಗತ್ಯ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
3. ಪೆನಾಂಗ್ ದೇಶದ ಉಪಮುಖ್ಯಮಂತ್ರಿ ಜಗದೀಪ್ ಸಿಂಗ್ ಡಿಯೋ ನೇತೃತ್ವದ ನಿಯೋಗ ಬೆಂಗಳೂರು ವಿಶ್ವ ವಿದ್ಯಾಲಯಕ್ಕೆ ಭೇಟಿ ; ಮಹತ್ವದ ಸಮಾಲೋಚನೆ
4. ಇಂದಿನಿಂದ ಮಲೇಷಿಯಾ ಓಪನ್ ಬ್ಯಾಡ್ಮಿಂಟನ್ ಟೂರ್ನಿ ; ಭಾರತದ ಪಿ.ವಿ. ಸಿಂಧು, ಲಕ್ಷ್ಯ ಸೇನ್ ಸೇರಿ ಪ್ರಮುಖರು ಕಣದಲ್ಲಿ

<><><><>

ನವದೆಹಲಿಯ ವಿಜ್ಞಾನ ಭವನದಲ್ಲಿಂದು "ಪೌಷ್ಠಿಕಾಂಶ ಭದ್ರತೆ ಮತ್ತು ಅಪೌಷ್ಟಿಕತೆ ತಗ್ಗಿಸುವಿಕೆಯಲ್ಲಿ ಸಾಂಸ್ಥಿಕ ಸಾಮಾಜಿಕ ಜವಾಬ್ದಾರಿಯ ಪಾತ್ರ" ಎಂಬ ಶೀರ್ಷಿಕೆಯ ಸಿಎಸ್ಆರ್ ಸಮಾವೇಶವನ್ನು ಕೇಂದ್ರ ಗೃಹ ವ್ಯವಹಾರ ಮತ್ತು ಸಹಕಾರ ಸಚಿವ ಅಮಿತ್ ಶಾ ಉದ್ಘಾಟಿಸಲಿದ್ದಾರೆ. ಮಕ್ಕಳಲ್ಲಿ ಅಪೌಷ್ಠಿಕತೆಯನ್ನು ಎದುರಿಸಲು ಸಹಭಾಗಿತ್ವ, ನವೀನ ಮತ್ತು ಸುಸ್ಥಿರ ಕಾರ್ಯತಂತ್ರಗಳ ಕುರಿತು ಚರ್ಚಿಸುವುದು ಈ ಸಮಾವೇಶದ ಉದ್ದೇಶವಾಗಿದೆ. ಈ ಕಾರ್ಯಕ್ರಮವನ್ನು ರಾಷ್ಟ್ರೀಯ ಡೈರಿ ಅಭಿವೃದ್ಧಿ ಮಂಡಳಿ ಆಯೋಜಿಸಿದೆ. ಛತ್ತೀಸ್‌ಗಢದ ಸೇಲ್-ಭಿಲಾಯಿ ಉಕ್ಕಿನ ಸ್ಥಾವರದ ಸಾಂಸ್ಥಿಕ ಸಾಮಾಜಿಕ ಜವಾಬ್ದಾರಿ, ಸಿಎಸ್ಆರ್ ಉಪಕ್ರಮದ ಅಡಿಯಲ್ಲಿ ಗಿಫ್ಟ್‌ಮಿಲ್ಕ್ ಕಾರ್ಯಕ್ರಮದ ಮೂರನೇ ಹಂತವನ್ನು ಪ್ರಾರಂಭಿಸಲಿದ್ದಾರೆ. ಈ ಉಪಕ್ರಮದಡಿಯಲ್ಲಿ, ಭಿಲಾಯಿ ಉಕ್ಕಿನ ಸ್ಥಾವರದ ಗಣಿಗಾರಿಕೆ ಪ್ರದೇಶಗಳಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಸುಮಾರು ನಾಲ್ಕು ಸಾವಿರ ಮಕ್ಕಳು ಪ್ರಯೋಜನ ಪಡೆಯುತ್ತಾರೆ.

<><><><>

ಕಾಂಗ್ರೆಸ್ ಪಕ್ಷ ಸಮಾಜದಲ್ಲಿ ಮಿಥ್ಯ ಹರಡುವ ಕೆಲಸದಲ್ಲಿ ತೊಡಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆಯನ್ನು ೨೦ ವರ್ಷಗಳ ಹಿಂದೆ ಕೇವಲ ಕೂಲಿ ಕೆಲಸದ ಕಲ್ಪನೆ ಇಟ್ಟುಕೊಂಡು ಜಾರಿಗೆ ತಂದಿದ್ದರು. ಈಗ ಪರಿಸ್ಥಿತಿ ಬದಲಾಗಿದೆ. ಜನರಿಗೆ ಕೆಲಸ ಕೊಡುವ ಜೊತೆಗೆ ೨೦೪೭ಕ್ಕೆ ವಿಕಸಿತ ಭಾರತದ ಜೊತೆಗೆ ವಿಕಸಿತ ಗ್ರಾಮಗಳೂ ಆಗಬೇಕಿದೆ ಎಂದು ಹೇಳಿದರು. ಆ ಹಿನ್ನೆಲೆಯಲ್ಲಿ ಜನರಿಗೆ ಅನುಕೂಲತೆ ಕಲ್ಪಿಸುವುದು, ಬಾಳಿಕೆ ಬರುವ ಆಸ್ತಿಗಳ ನಿರ್ಮಾಣ, ಗ್ರಾಮದ ಒಟ್ಟಾರೆ ಮೂಲಭೂತ ಸೌಕರ್ಯ ವೃದ್ಧಿಯಾಗಿ ಜನರಿಗೆ ಅನುಕೂಲ ಆಗಬೇಕೆಂಬ ಕಾರಣದಿಂದ ಇದು ಬದಲಾಗಿದೆ ಎಂದು ವಿವರಿಸಿದರು.

<><><><>

ಮಲೇಷಿಯಾದ ದ್ವೀಪ ರಾಜ್ಯ ಪೆನಾಂಗ್‌ನ ಉಪಮುಖ್ಯಮಂತ್ರಿ ಜಗದೀಪ್ ಸಿಂಗ್ ಡಿಯೋ ನೇತೃತ್ವದ ಉನ್ನತ ಮಟ್ಟದ ನಿಯೋಗ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡಿ ಮಹತ್ವದ ಸಮಾಲೋಚನೆ ನಡೆಸಿದೆ. ಕುಲಪತಿ ಪ್ರೊಫೆಸರ್.ರಮೇಶ್.ಬಿ. ನಿಯೋಗವನ್ನು ಸ್ವಾಗತಿಸಿ ಬರಮಾಡಿಕೊಂಡರು. ಉಭಯ ನಿಯೋಗವು ಉನ್ನತ ಶಿಕ್ಷಣ ಮತ್ತು ಕೌಶಲ್ಯ ತರಬೇತಿ ವಿಚಾರದಲ್ಲಿ ಪರಸ್ಪರ ಸಹಕಾರದ ಸಾಧ್ಯತೆಗಳ ಕುರಿತು ಸುದೀರ್ಘ ಚರ್ಚೆ ನಡೆಸಿತು. ವಿಶ್ವವಿದ್ಯಾನಿಲಯದ ಜಾಗತಿಕ ಭಾಷಾ ಕೇಂದ್ರ, ವಿಜ್ಞಾನ, ವಾಣಿಜ್ಯ, ಆಡಳಿತ ಮತ್ತು ಕಂಪ್ಯೂಟರ್ ಶಿಕ್ಷಣ ವಿಭಾಗಗಳ ಜೊತೆ ವಿದ್ಯಾರ್ಥಿ ಮತ್ತು ಬೋಧಕ ವಿನಿಮಯ ಕಾರ್ಯಕ್ರಮ ಹಮ್ಮಿಕೊಳ್ಳಲು ಪೆನಾಂಗ್ ನಿಯೋಗ ಅಪಾರ ಆಸಕ್ತಿ ವ್ಯಕ್ತಪಡಿಸಿತು. ಈ ನಿಟ್ಟಿನಲ್ಲಿ ಆದಷ್ಟು ಬೇಗ ಅಧಿಕೃತ ಒಡಂಬಡಿಕೆ ಮಾಡಿಕೊಳ್ಳುವುದಾಗಿ ಪೆನಾಂಗ್ ಉಪಮುಖ್ಯಮಂತ್ರಿ ಖಚಿತಪಡಿಸಿದರು. ವಿಶ್ವವಿದ್ಯಾನಿಲಯದ ನಿಯೋಗವನ್ನು ಪೆನಾಂಗ್ ಕೈಗಾರಿಕೆ ಮತ್ತು ಶಿಕ್ಷಣ ವಸ್ತುಪ್ರದರ್ಶನದಲ್ಲಿ ಪಾಲ್ಗೊಳ್ಳಲು ಅವರು ಆಮಂತ್ರಣ ನೀಡಿದರು.

<><><><>

ಕಳೆದ ೧೧ ವರ್ಷಗಳಿಂದ ಬದಲಾಗದೆ ಉಳಿದಿರುವ ನೌಕರರ ಭವಿಷ್ಯ ನಿಧಿ ಯೋಜನೆ ಅಡಿಯಲ್ಲಿ ವೇತನ ಮಿತಿಯನ್ನು ಪರಿಷ್ಕರಿಸುವ ಬಗ್ಗೆ ನಾಲ್ಕು ತಿಂಗಳೊಳಗೆ ನಿರ್ಧರಿಸುವಂತೆ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರ ಮತ್ತು ನೌಕರರ ಭವಿಷ್ಯ ನಿಧಿ ಸಂಸ್ಥೆಗೆ ನಿರ್ದೇಶನ ನೀಡಿದೆ. ವೇತನ ಮಿತಿ ಸ್ಥಗಿತಗೊಂಡಿರುವುದರಿಂದ ಸಂಘಟಿತ ವಲಯದ ಉದ್ಯೋಗಿಗಳಿಗೆ ಸಾಮಾಜಿಕ

ಭದ್ರತೆಯನ್ನು ಒದಗಿಸುವ ಉದ್ದೇಶಿತ ಸಾಮಾಜಿಕ ಕಲ್ಯಾಣ ಯೋಜನೆಯಾದ ಇಪಿಎಫ್‌ಒ ವ್ಯಾಪ್ತಿಯಿಂದ ಹೆಚ್ಚಿನ ಸಂಖ್ಯೆಯ ಕಾರ್ಮಿಕರನ್ನು ಹೊರಗಿಡಲಾಗಿದೆ ಎಂದು ನ್ಯಾಯಮೂರ್ತಿಗಳಾದ ಜೆ.ಕೆ. ಮಹೇಶ್ವರಿ ಮತ್ತು ಅತುಲ್ ಎಸ್. ಚಂದೂರ್ಕರ್ ಅವರ ಪೀಠವು ಆದೇಶಿಸಿದೆ.

<><><>

ಬಿಮ್‌ಸ್ಟೆಕ್ ದೇಶಗಳಿಗೆ ಕ್ಯಾನ್ಸರ್ ಆರೈಕೆಯಲ್ಲಿ ವಿಶೇಷ ತರಬೇತಿ ಕಾರ್ಯಕ್ರಮದ ಎರಡನೇ ಹಂತವನ್ನು ವಿಶಾಖಪಟ್ಟಣಂನ ಹೋಮಿ ಬಾಬಾ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದಲ್ಲಿ ಪ್ರಾರಂಭಿಸಲಾಗಿದೆ. ಈ ಕಾರ್ಯಕ್ರಮವನ್ನು ವಿದೇಶಾಂಗ ಸಚಿವಾಲಯದ ಜಂಟಿ ಕಾರ್ಯದರ್ಶಿ ಸಿ.ಎಸ್.ಆರ್. ರಾಮ್ ನಿನ್ನೆ ಉದ್ಘಾಟಿಸಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಬಾಂಗ್ಲಾದೇಶ, ಭೂತಾನ್, ಮ್ಯಾನ್ಮಾರ್, ಶ್ರೀಲಂಕಾ, ಥೈಲ್ಯಾಂಡ್ ಮತ್ತು ನೇಪಾಳ ಸೇರಿದಂತೆ ಬಿಮ್‌ಸ್ಟೆಕ್ ದೇಶಗಳ ಭಾಗವಹಿಸುವವರನ್ನು ಈ ಕಾರ್ಯಕ್ರಮ ಒಟ್ಟುಗೂಡಿಸುತ್ತದೆ ಎಂದು ಹೇಳಿದರು. ಹೆಚ್ಚುತ್ತಿರುವ ಕ್ಯಾನ್ಸರ್ ಹೊರೆ ಮತ್ತು ಈ ಪ್ರದೇಶದಲ್ಲಿ ಗುಣಮಟ್ಟದ ಆರೈಕೆಗೆ ಅಸಮಾನ ಪ್ರವೇಶವು ಸಾಮರ್ಥ್ಯ ವೃದ್ಧಿ ಮತ್ತು ಕೌಶಲ್ಯ ಅಭಿವೃದ್ಧಿಯನ್ನು ಅತ್ಯಗತ್ಯಗೊಳಿಸುತ್ತದೆ. ಪ್ರಾದೇಶಿಕ ಸಹಯೋಗ ಮತ್ತು ಸಂಶೋಧನೆಯನ್ನು ಬೆಳೆಸುವ ಜೊತೆಗೆ ಕ್ಯಾನ್ಸರ್ ಆರೈಕೆ ಸೇವೆಗಳನ್ನು ಸುಧಾರಿಸುವ ಗುರಿಯನ್ನು ಈ ಉಪಕ್ರಮ ಹೊಂದಿದೆ. ಪ್ರಧಾನಿ ನರೇಂದ್ರ ಮೋದಿ ಅವರು ೬ನೇ ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಈ ಕಾರ್ಯಕ್ರಮವನ್ನು ಘೋಷಿಸಿದ್ದರು. ವಿದೇಶಾಂಗ ಸಚಿವಾಲಯದ ಬೆಂಬಲದೊಂದಿಗೆ ಟಾಟಾ ಸ್ಮಾರಕ ಕೇಂದ್ರವು ಇದನ್ನು ಕಾರ್ಯಗತಗೊಳಿಸುತ್ತಿದೆ.

<><><>

ಪಾವತಿ ನಿಯಂತ್ರಣ ಮಂಡಳಿಯ ಮೊದಲ ಸಭೆ ನಿನ್ನೆ ಮುಂಬೈನಲ್ಲಿ ರಿಸರ್ವ್ ಬ್ಯಾಂಕ್ ಗವರ್ನರ್ ಸಂಜಯ್ ಮಲ್ಹೋತ್ರಾ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ಕಳೆದ ವರ್ಷ ಮೇ ೯ ರಂದು ಜಾರಿಗೆ ಬಂದ ಪಾವತಿ ಮತ್ತು ವಸಾಹತು ವ್ಯವಸ್ಥೆಗಳ ಕಾಯ್ದೆ ೨೦೦೭ರ ತಿದ್ದುಪಡಿಗಳ ನಂತರ ಮಂಡಳಿಯನ್ನು ರಚಿಸಲಾಯಿತು. ಮಂಡಳಿಯ ಸಭೆಯು ಪಾವತಿ ಮತ್ತು ವಸಾಹತು ವ್ಯವಸ್ಥೆಗಳ ಇಲಾಖೆಯ ಕಾರ್ಯನಿರ್ವಹಣೆಯನ್ನು ಪರಿಶೀಲಿಸಿತು ಮತ್ತು ದೇಶೀಯ, ಜಾಗತಿಕ ಪಾವತಿ ವ್ಯವಸ್ಥೆಗಳನ್ನು ಒಳಗೊಂಡ ಪ್ರಮುಖ ಗಮನ ಕ್ಷೇತ್ರಗಳ ಬಗ್ಗೆ ಚರ್ಚಿಸಿತು. ಸದಸ್ಯರು ಕರಡು

ಪಾವತಿ ವಿಷನ್ ೨೦೨೮ ಅನ್ನು ಸಹ ಪರಿಶೀಲಿಸಿದರು ಮತ್ತು ಡಿಜಿಟಲ್ ಪಾವತಿಗಳ ಕುರಿತು ರಿಸರ್ವ್ ಬ್ಯಾಂಕಿನ ಇತ್ತೀಚಿನ ಸಮೀಕ್ಷೆಯ ಸಂಶೋಧನಾ ವರದಿಗಳನ್ನು ಪರಾಮರ್ಶನೆ ಮಾಡಿದರು.

<><><><>

ಬಾಂಗ್ಲಾದೇಶದ ಜೆನೈದಾ ಜಿಲ್ಲೆಯ ಕಾಲಿಗಂಜ್ ಉಪಜಿಲ್ಲಾದಲ್ಲಿ ಹಿಂದೂ ಮಹಿಳೆಯೊಬ್ಬರು ತನ್ನ ಮೇಲೆ ಸಾಮೂಹಿಕ ಹತ್ಯಾಚಾರ ನಡೆಸಿ, ಮರಕ್ಕೆ ಕಟ್ಟಿ ಕ್ರೂರವಾಗಿ ಚಿತ್ರಹಿಂಸೆ ನೀಡಿರುವುದಾಗಿ ಆರೋಪಿಸಿದ್ದಾರೆ. ತನ್ನ ಕೂದಲನ್ನು ಕತ್ತರಿಸಲಾಗಿದೆ ಮತ್ತು ದೌರ್ಜನ್ಯದ ವೀಡಿಯೊ ಚಿತ್ರೀಕರಣ ಮಾಡಲಾಗಿದೆ ಎಂದು ನಿನ್ನೆ ಪೊಲೀಸರಿಗೆ ದೂರು ಸಲ್ಲಿಸಿದ್ದಾರೆ. ಅಲ್ಲಿನ ಕಾಲಿಗಂಜ್ ಪೊಲೀಸ್ ಠಾಣೆಯಲ್ಲಿ ಮಹಿಳೆ ಪ್ರಕರಣ ದಾಖಲಿಸಿದ್ದು, ಇಬ್ಬರು ಪುರುಷರು ಮತ್ತು ಇಬ್ಬರು ಮಹಿಳೆಯರನ್ನು ಆರೋಪಿಗಳೆಂದು ಹೆಸರಿಸಿದ್ದಾರೆ. ಈ ದುಷ್ಕೃತ್ಯಕ್ಕೆ ವ್ಯಾಪಕ ಖಂಡನೆ ವ್ಯಕ್ತವಾಗಿದೆ.

<><><><>

ಬ್ಯಾಡ್ಮಿಂಟನ್‌ನಲ್ಲಿ, ಎರಡು ಬಾರಿ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು ಇಂದು ಕೌಲಾಲಂಪುರದ ಸ್ಟೇಡಿಯಂ ಆಕ್ಸಿಯಾಟಾ ಅರೆನಾದಲ್ಲಿ ನಡೆಯಲಿರುವ ಮಲೇಷ್ಯಾ ಓಪನ್ ೨೦೨೫ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಮತ್ತೆ ಕಣಕ್ಕಿಳಿಯಲಿದ್ದಾರೆ. ಭಾರತದ ಮಹಿಳಾ ಸಿಂಗಲ್ಸ್ ಸವಾಲಿನಲ್ಲಿ ಮಾಲ್ವಿಕಾ ಬನ್ಸೋಡ್ ಮತ್ತು ಉನ್ನತಿ ಹೂಡಾ ಕೂಡ ಭಾಗವಹಿಸಲಿದ್ದಾರೆ. ಪುರುಷರ ಸಿಂಗಲ್ಸ್‌ನಲ್ಲಿ, ಲಕ್ಷ್ಯಸೇನ್ ಮತ್ತು ಆಯುಷ್ ಶೆಟ್ಟಿ ಭಾರತದ ಭರವಸೆಯ ಆಟಗಾರರಾಗಿ ತಮ್ಮ ಸಾಮರ್ಥ್ಯ ಪ್ರದರ್ಶಿಸಲಿದ್ದಾರೆ. ಪುರುಷರ ಡಬಲ್ಸ್‌ನಲ್ಲಿ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಭಾರತ ತಂಡವನ್ನು ಮುನ್ನಡೆಸಲಿದ್ದಾರೆ. ಮಹಿಳೆಯರ ಡಬಲ್ಸ್‌ನಲ್ಲಿ ಟ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಆಡಲಿದ್ದಾರೆ.

<><><><>

ಭುವನೇಶ್ವರದ ಕೆಐಐಟಿ ಮತ್ತು ಕೆಐಎಸ್‌ಎಸ್‌ನ ಸಂಸ್ಥಾಪಕ ಡಾ. ಅಚ್ಯುತ ಸಮಂತ, ಭಾರತೀಯ ವಾಲಿಬಾಲ್ ಫೆಡರೇಶನ್‌ನ ಮುಖ್ಯ ಪೋಷಕರಾಗಿ ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ವಾರಣಾಸಿಯಲ್ಲಿ ೭೨ನೇ ಸೀನಿಯರ್ ರಾಷ್ಟ್ರೀಯ ವಾಲಿಬಾಲ್ ಚಾಂಪಿಯನ್‌ಶಿಪ್-೨೦೨೫ ನಡೆಯುತ್ತಿದ್ದು, ಇದೇ ಸಂದರ್ಭದಲ್ಲಿ ಅಚ್ಯುತ ಸಮಂತ ಅವರು ಆಯ್ಕೆಯಾಗಿದ್ದಾರೆ. ಈ ಪಂದ್ಯಾವಳಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಕಳೆದ ಭಾನುವಾರ ಚಾಲನೆ ನೀಡಿದ್ದರು.

ವಾರಣಾಸಿಯಲ್ಲಿ ನಡೆದ ಭಾರತೀಯ ವಾಲಿಬಾಲ್ ಫೆಡರೇಶನ್‌ನ ವಾರ್ಷಿಕ ಮಂಡಳಿ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ದೇಶದ ಎಲ್ಲಾ ರಾಜ್ಯಗಳ ವಾಲಿಬಾಲ್ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಮತ್ತು ಪದಾಧಿಕಾರಿಗಳು ಈ ಸಭೆಯಲ್ಲಿ ಭಾಗವಹಿಸಿದ್ದರು. ಡಾ. ಸಮಂತ ಸದ್ಯ ಒಡಿಶಾ ವಾಲಿಬಾಲ್ ಅಸೋಸಿಯೇಷನ್‌ನ ಅಧ್ಯಕ್ಷರೂ ಸಹ ಆಗಿದ್ದಾರೆ.

<><><><>

ದಕ್ಷಿಣ ಆಫ್ರಿಕಾ ಬೆನೋನಿಯ ವಿಲ್ಲೋಮೂರ್ ಪಾರ್ಕ್‌ನಲ್ಲಿ ನಡೆದ ೧೯ ವರ್ಷದೊಳಗಿನ ಕ್ರಿಕೆಟ್ ಪಂದ್ಯದಲ್ಲಿ, ಆತಿಥೇಯ ದಕ್ಷಿಣ ಆಫ್ರಿಕಾವನ್ನು ಡಕ್ ವರ್ತ್ ಲೂಯಿಸ್ ನಿಯಮದ ಪ್ರಕಾರ ಭಾರತ ೮ ವಿಕೆಟ್‌ಗಳಿಂದ ಸೋಲಿಸಿತು. ಮೊದಲಿಗೆ ಬೌಲರ್‌ಗಳ ಸಾಮೂಹಿಕ ಪ್ರಯತ್ನದಿಂದ ದಕ್ಷಿಣ ಆಫ್ರಿಕಾ ತಂಡವನ್ನು ೨೪೫ ರನ್‌ಗಳಿಗೆ ಭಾರತ ತಂಡ ಕಟ್ಟಿಹಾಕಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>